# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೊಂದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:13ನೇ ಡಿಸೆಂಬರ್, 2023**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 3 ಮತ್ತು 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸುನೀಲ್‌ಗೌಡ ಪಾಟೀಲ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 35(316) ಮತ್ತು 66(478) | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 37(252) | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |
| 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸೂರಜ್ ರೇವಣ್ಣ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 88(605) | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ)** ಅವರು 2023–24ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 136ನೇ ವರದಿಯನ್ನೊಪ್ಪಿಸುವುದು.

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2023
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ, 2023
**ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2023
**ಶ್ರೀ ಪ್ರಿಯಾಂಕ್ ಖರ್ಗೆ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ, 2023
**ಶ್ರೀ ಡಿ. ಸುಧಾಕರ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರಾವಳಿ ಅಭಿವೃದ್ಧಿ ಮಂಡಲಿ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ತಿಪ್ಪಣ್ಣಪ್ಪ** ಅವರು ವಿಶ್ವಗುರು ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ಬೆಂಗಳೂರಿನ ಪ್ರತಿಷ್ಠಿತ ಸ್ಥಳದಲ್ಲಿ ಸ್ಥಾಪಿಸುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

೦೨. **ಶ್ರೀ ಯು.ಬಿ. ವೆಂಕಟೇಶ್** ಅವರು ತುಮಕೂರು ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದಲ್ಲಿ ಮೌಢ್ಯ ಆಚರಣೆಯಿಂದಾಗಿ ಹೆರಿಗೆ ನಂತರ ಊರ ಹೊರಗಿನ ಗುಡಿಸಲಿನಲ್ಲಿ ಬಾಣಂತಿ ಮತ್ತು ಮಗುವನ್ನು ಇರಿಸಲಾಗಿದ್ದ ಪರಿಣಾಮ ನವಜಾತ ಶಿಶು ಅನಾರೋಗ್ಯದಿಂದ ಸಾವನ್ನಪ್ಪಿರುವುದರಿಂದ ಮೌಢ್ಯ ಆಚರಣೆಯ ಅನಿಷ್ಟ ಪದ್ಧತಿಯನ್ನು ಹೋಗಲಾಡಿಸಲು ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಕಂಕಣವಾಡಿ ಗ್ರಾಮದ ಆಲಮಟ್ಟಿ ಜಲಾಶಯದ ಹಿನ್ನೀರಿನ ನಡುಗಡ್ಡೆಯಲ್ಲಿ ಜನರಿಗೆ ಪ್ರಯಾಣಿಸಲು ಹಾಗೂ ಬೆಳೆದ ಬೆಳೆಗಳನ್ನು ಸಾಗಿಸಲು **"ಬೋಟಿಂಗ್ ವ್ಯವಸ್ಥೆ"** ಕಲ್ಪಿಸುವ ಬಗ್ಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ–2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ–ಆತಂಕಗಳ ಗಂಭೀರ ವಿಷಯದ ಕುರಿತು ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ.

## 06. ನಿಯಮ 330ರ ಮೇರೆಗೆ

೦1. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್ ರಾಜ್ ಕಾಯಿದೆ 1993ರಂತೆ ತ್ರಿಸ್ಥರ ಪಂಚಾಯತ್‌ಗಳಾದ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಕಾರ್ಯಕ್ರಮಗಳು, ಆಡಳಿತ ಮಾನವ ಸಂಪನ್ಮೂಲಗಳು ಮತ್ತು ಅನುದಾನಗಳನ್ನು ವರ್ಗಾವಣೆ ಮಾಡಿ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀಯುತರುಗಳಾದ ಡಾ: ತೇಜಸ್ವಿನಿ ಗೌಡ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ, ಕೆ.ಎಸ್. ನವೀನ್, ಸೂರಜ್ ರೇವಣ್ಣ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಸುರಕ್ಷೆ ಅಪಾಯದಲ್ಲಿರುವುದರಿಂದ ಸರ್ವಾಂಗೀಣ ಭದ್ರತೆ ಮತ್ತು ರಕ್ಷಣೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦೩. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ದಿನಾಂಕ:01.04.2006ರ ನಂತರ ನೇಮಕಗೊಂಡ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು.

4..

೦4. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ, ಮಧು ಜಿ. ಮಾದೇಗೌಡ, ಶಶೀಲ್ ಜಿ. ನಮೋಶಿ ಹಾಗೂ ಎಸ್.ವ್ಹಿ. ಸಂಕನೂರ** ಅವರುಗಳು ಪ್ರತಿ ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಕಡಿಮೆ ಮಾಡಲು ಹಾಗೂ ಯಾವುದೇ ಅನುಭವ ತರಬೇತಿ ಇಲ್ಲದ ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದಲ್ಲದೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಭಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುವುದರಿಂದ ಉದ್ಭವಿಸುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಬಿ.ಎಂ. ಫಾರೂಖ್** ಅವರು ಮಂಗಳೂರಿನ ಉಲ್ಲಾಳ ನಗರದಲ್ಲಿ ಸ್ಥಾಪಿತವಾಗಿರುವ ಫಿಶ್ ಮಿಲ್ ತಯಾರಿಕಾ ಘಟಕದಿಂದ ಪರಿಸರ ಹಾಗೂ ಅಲ್ಲಿನ ಜನರ ಆರೋಗ್ಯ ಮತ್ತು ದೈನಂದಿನ ಚಟುವಟಿಕೆಗಳ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದರಿಂದ ಫಿಶ್ ಮಿಲ್ ತಯಾರಿಕಾ ಘಟಕವನ್ನು ಸ್ಥಳಾಂತರಿಸಲು ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಮೀನುಗಾರರು ಮತ್ತು ಮೀನು ರಫ್ತುದಾರರಿಗೆ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:–**<br>**ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** | ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ |

## 08. ವಿಶೇಷ ಚರ್ಚೆ

**ಶ್ರೀಯುತರುಗಳಾದ ನಿರಾಣಿ ಹಣಮಂತ್ ರುದ್ರಪ್ಪ, ಕೆ.ಎ. ತಿಪ್ಪೇಸ್ವಾಮಿ, ಕೋಟ ಶ್ರೀನಿವಾಸ ಪೂಜಾರಿ, ಶರವಣ ಟಿ.ಎ, ಎನ್. ರವಿಕುಮಾರ್ ಹಾಗೂ ಇತರರುಗಳು** ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವುದು. ಉತ್ತರ ಕರ್ನಾಟಕದ ಕೃಷ್ಣ, ತುಂಗಾ–ಭದ್ರ, ಮಲಪ್ರಭ, ಘಟಪ್ರಭ, ಮಹದಾಯಿ ನದಿಗಳ ನೀರಾವರಿ ಯೋಜನೆಗಳ ಅನುಷ್ಠಾನ ಹಾಗೂ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಕುರಿತು ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**